ಶ್ರೀ ಬಿ.ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು)

ಅ) ಇಲ್ಲ.

ಆ) ಅನಧಿಕೃತ ಸಾರಾಯಿ ಅಂಗಡಿಗಳು ಕಂಡುಬಂದ ಕಡೆ ಕಾನೂನಿನನ್ವಯ ಕ್ರಮ ಜರುಗಿಸಲಾಗುವುದು.

ಇ) ತಾಲ್ಲೂಕನ್ನು ಒಂದು ಘಟಕವೆಂದು ಪರಿಗಣಿಸಿ ಸಾರಾಯಿ ಮಾರಾಟ ಹಕ್ಕಿನ ಗುತ್ತಿಗೆಯನ್ನು ವಿಲೇ ಮಾಡುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಯಾವುದೇ ಆರ್ಥಿಕ ನಷ್ಟ ಉಂಟಾಗಿರುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

424 (546) ಶ್ರೀ ವೈಜನಾಥ ಪಾಟೀಲ್ (ಚಿಂಚೋಳಿ): ಮಾನ್ಯ ಯೋಜನಾ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಂವಿಧಾನದ 371ನೇ ಕಲಮಿನ ಪ್ರಕಾರ ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡಬೇಕೆಂಬ ರಾಜ್ಯದ ಕೋರಿಕೆಯನ್ನು ಕೇಂದ್ರ ಸರ್ಕಾರ ತಿರಸ್ಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಹಿಂದುಳಿದ ಪ್ರದೇಶಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮುಂದೆ ಅನುಸರಿಸುವ ಕ್ರಮವೇನು?

ಶ್ರೀ ರಾಮಚಂದ್ರಗೌಡ (ಯೋಜನಾ ಸಚಿವರು)

ಅ) ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ ಪ್ರಾಂತೀಯ ಸ್ಥಾನಮಾನ ನೀಡಲು ಸಂವಿಧಾನಕ್ಕೆ ತಿದ್ದುಪಡಿ ಮಾಡಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿತ್ತು. ಆದರೆ ಅನುಚ್ಛೇದ 371 D ಅಡಿಯಲ್ಲಿ ಆಂಧ್ರಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡಿರುವ ರೀತಿಯಲ್ಲೇ ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡಲು ಸಂವಿಧಾನಕ್ಕೆ ತಿದ್ದುಪಡಿ ಮಾಡಲು ರಾಜ್ಯ ಸರ್ಕಾರವು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಗಣಿಸಲು ಬರುವುದಿಲ್ಲವೆಂದು ಕೇಂದ್ರ ಸರ್ಕಾರವು ಸ್ಪಷ್ಟವಾಗಿ ತಿಳಿಸಿರುತ್ತದೆ. ಆದಾಗ್ಯೂ ಸಂವಿಧಾನದ ಅನುಚ್ಛೇದ 371 (2)ರ ಅಡಿಯಲ್ಲಿ ಮಹಾರಾಷ್ಟ್ರದಲ್ಲಿ ಅಭಿವೃದ್ಧಿ ಮಂಡಳಿಗಳನ್ನು ರಚಿಸಿರುವಂತೆ ಕರ್ನಾಟಕದಲ್ಲೂ ಅಭಿವೃದ್ಧಿ ಮಂಡಳಿಗಳನ್ನು ರಚಿಸಲು ಪ್ರಸ್ತಾವನೆಯನ್ನು ಕಳುಹಿಸಿದ್ದಲ್ಲಿ ಅದನ್ನು ಪರಿಗಣಿಸಬಹುದಾಗಿದೆ ಎಂದು ಸಲಹೆ ನೀಡಿರುತ್ತದೆ.

ಆ) ಮಹಾರಾಷ್ಟ್ರ ಮಾದರಿಯಲ್ಲಿ ಪ್ರತ್ಯೇಕ ಮಂಡಳಿಗಳನ್ನು ರಚಿಸುವ ಬಗ್ಗೆ ಅಲ್ಲಿ ರಚಿಸಿರುವ ಮಂಡಳಿಗಳ ಮಾದರಿ ಮತ್ತು ಸಾಧ್ಯತೆಗಳ ಬಗ್ಗೆ ಅಧ್ಯಯನ ನಡೆಸಲು ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿಯವರನ್ನು ಮಹಾರಾಷ್ಟ್ರಕ್ಕೆ ನಿಯೋಜಿಸಲಾಗಿತ್ತು. ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿಯವರು ಈ ಬಗ್ಗೆ ಸಲ್ಲಿಸಿರುವ ವರದಿಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.